114

## ವಿಧಾನ ಪರಿಷತ್ ಸದಸ್ಯರಾದ ಮಾನ್ಯ ಶ್ರೀ ಟಿ.ಎನ್ ಜಯರಾಯಿಗೌಡ ರವರು 72ನೇ ನಿಯಮದ ಮೇರೆಗೆ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಉತ್ತರ

**ವಿಷಯ:-**

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಪಿ.ಆರ್.ಆರ್.ಯೋಜನೆಗೆ ಭೂಮಿ ನೀಡಿದ ರೈತರಿಗೆ ಪರಿಹಾರದ ದರ ನಿಗದಿಪಡಿಸಲಾಗುವುದು ಎಂದು ವಿಜಯ ಕರ್ನಾಟಕದ ದಿನಾಂಕ:06.11.2024ರ ಪತ್ರಿಕೆಯಲ್ಲಿ ವರದಿಯಾಗಿದೆ. ಭೂಸ್ವಾಧೀನ ಕಾಯಿದೆ 1894 ಮತ್ತು 2013ರ ಕಾಯಿದೆಯ ಸಾಮ್ಯತೆಗೆ ಅನುಗುಣವಾಗಿ ಪರಿಹಾರ ನಿಗದಿಪಡಿಸಲಾಗುವುದು ಎಂದು ಹೇಳಲಾಗಿದೆ. ಪೆರಿಫೆರಲ್ ವರ್ತುಲ ರಸ್ತೆ ನಿರ್ಮಾಣ ಸಂಬಂಧ ಬಿಡಿಎ ಸುಮಾರು 4 ಸಾವಿರ ರೈತರಿಗೆ ನೋಟೀಸ್ ನೀಡಿದ್ದಾರೆ. ಭೂಮಿ ಬಿಟ್ಟುಕೊಟ್ಟು ಪರಿಹಾರ ಪಡೆಯುವ ಸಂಬಂಧ ತಮ್ಮ ಒಪ್ಪಿಗೆ ಸೂಚಿಸುವಂತೆ ರೈತರಲ್ಲಿ ವಿನಂತಿಸಿಕೊಂಡಿದ್ದಾರೆ. ಆಗ ಪಿ.ಆರ್.ಆರ್.ರಸ್ತೆ ಹಾದು ಹೋಗುವ ಮಾರ್ಗದಲ್ಲಿ ಪ್ರತಿ ಎಕರೆಗೆ ಒಂದರಿಂದ ಒಂದೂವರೆ ಕೋಟಿ ರೂ ದರ ಇತ್ತು, ಈಗ ಅದರ ಬೆಲೆ ಮೂರ್ನಾಲ್ಕು ಪಟ್ಟು ಏರಿಕೆಯಾಗಿದೆ. ಹೀಗಾಗಿ ವಿಳಂಬ ಮಾಡಿದ್ದು, ಬಿ.ಡಿ.ಎ ಮಾಡಿದ ತಪ್ಪು, ಇದಕ್ಕೆ ರೈತರು ಜವಾಬ್ದಾರರಲ್ಲ, ಹೀಗಾಗಿ ರೈತರಿಗೆ ಹೊಸ ದರ ನೀಡಬೇಕು. ಇಲ್ಲವೇ ಯೋಜನೆ ಕೈಬಿಡಬೇಕು ಎಂದು ರೈತರು ನೋಟೀಸ್‌ಗೆ ಉತ್ತರ ನೀಡಿದ್ದಾರೆ. ಪಿ.ಆರ್.ಆರ್.ರಸ್ತೆ ನಿರ್ಮಾಣಕ್ಕಾಗಿ ಮೊದಲ ಹಂತದಲ್ಲಿ 1800 ಎಕರೆ ಎರಡನೇ ಹಂತದಲ್ಲಿ 2022ರಲ್ಲಿ 600 ಎಕರೆಗೆ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದೆ. ಸರ್ಕಾರ ರಸ್ತೆ ನಿರ್ಮಾಣಕ್ಕೆ ಅಗತ್ಯವಿರುವ ಭೂಮಿ ಸ್ವಾಧೀನಕ್ಕೆ 15 ವರ್ಷಗಳ ಹಿಂದೆಯೇ ಅಧಿಸೂಚನೆ ಹೊರಡಿಸಿತ್ತು. ಹೀಗಾಗಿ ರೈತರು ಈ ಅಧಿಸೂಚಿತ ಭೂಮಿಯಲ್ಲಿ ಬೆಳೆಯನ್ನು ಬೆಳೆಯಲಾಗದೆ, ಯಾವುದೇ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗದೆ ಸಂಕಷ್ಟಕ್ಕೆ ಸಿಲುಕಿದ್ದಾರೆ. ಆದ್ದರಿಂದ ಸರ್ಕಾರ ದಯಮಾಡಿ ಭೂಸ್ವಾಧೀನ ಕಾಯಿದೆ 1894ರ ಬದಲು 2013ರ ಕಾಯಿದೆಯಂತೆ ರೈತರಿಗೆ ಪರಿಹಾರ ನೀಡುವ ಬಗ್ಗೆ.

**ಉತ್ತರ:-**

ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಪೆರಿಫೆರಲ್ ರಿಂಗ್ ರಸ್ತೆ ಭಾಗ-1) ನಿರ್ಮಾಣಕ್ಕಾಗಿ ಅವಶ್ಯಕವಾದ ಜಮೀನುಗಳ ಭೂಸ್ವಾಧೀನಕ್ಕಾಗಿ ದಿನಾಂಕ:29.06.2007 ರಂದು 1810 ಎಕರೆ 18.05 ಗುಂಟೆ ಜಮೀನಿಗೆ ಅಂತಿಮ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ ಹಾಗೂ ದಿನಾಂಕ:18.04.2022ರಲ್ಲಿ 608 ಎಕರೆ 8.25 ಗುಂಟೆ ಜಮೀನಿಗೆ ಪ್ರಾಥಮಿಕ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ.

ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಪೆರಿಫೆರಲ್ ರಿಂಗ್ ರಸ್ತೆ) ಯೋಜನೆಗೆ ಭೂಸ್ವಾಧೀನಪಡಿಸಿಕೊಳ್ಳುವ ಜಮೀನಿನ ಭೂಮಾಲೀಕರಿಗೆ ಆಯಾ ಗ್ರಾಮವಾರು ಮಾರ್ಗಸೂಚಿ ದರವನ್ನು ಗಮನದಲ್ಲಿರಿಸಿಕೊಂಡು ಸಂಧಾನ ಸೂತ್ರ (ಸಂಧಾನಿತ ಮೊತ್ತ)ದ ಮೂಲಕ ಭೂಸ್ವಾಧೀನ ಕಾಯ್ದೆ, 1894 ರಡಿ ನಿಗದಿಪಡಿಸಬಹುದಾದ ಭೂಪರಿಹಾರ ಮೊತ್ತಕ್ಕಿಂತ ಹೆಚ್ಚಿನ ಪರಿಹಾರ ಮೊತ್ತವನ್ನು ನಿಗದಿಪಡಿಸಲು ಅಥವಾ ಭೂಮಾಲೀಕರು ಒಪ್ಪಿದಲ್ಲಿ ಟಿ.ಡಿ.ಆರ್. ನೀಡಲು ಕ್ರಮವಹಿಸಲಾಗುತ್ತಿದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯವು MA.No.1614-1616/2019 IN MA No.1346-1348/2019 IN CA No.7661-7663/2018ರಲ್ಲಿ ನೀಡಿರುವ ದಿನಾಂಕ:20.01.2022ರ ಆದೇಶದನ್ವಯ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ, 1976ರಡಿ ಪ್ರಾಧಿಕಾರದ ಭೂಸ್ವಾಧೀನಕ್ಕೆ 2013ರ ಭೂಸ್ವಾಧೀನ ಕಾಯ್ದೆಯು ಅನ್ವಯವಾಗುವುದಿಲ್ಲ.

**ಸಂಖ್ಯೆ**:ನಅಇ112 ಬೆಂಭೂಸ್ವಾ 2025

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ